# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2026 ನೇ ಸಾಲಿನಲ್ಲಿ ಆಯುಷ್ ಇಲಾಖೆಯಲ್ಲಿ ಸಮಾಲೋಚನೆ ಮುಖಾಂತರ ವರ್ಗಾವಣೆ ಪ್ರಕ್ರಿಯೆ ಕೈಗೊಳ್ಳಲು ವರ್ಗಾವಣಾ ವೇಳಾಪಟ್ಟಿಯ ಕುರಿತು.

**ಓದಲಾಗಿದೆ:** ಆಯುಕ್ತರು, ಆಯುಷ್ ಇಲಾಖೆ ಇವರ ಏಕ ಕಡತ ಸಂಖ್ಯೆ: AYUSH/47/ EST5/ 2025.

**ಪ್ರಸ್ತಾವನೆ:**

ಮೇಲೆ ಓದಲಾದ ಏಕ ಕಡತದಲ್ಲಿ ಆಯುಷ್ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವರ್ಗಾವಣೆಗೆ ಸಂಬಂಧಿಸಿದಂತೆ ಹೊರಡಿಸಲಾಗಿರುವ ಸರ್ಕಾರದ ಆದೇಶ ಸಂಖ್ಯೆ: ಆಕುಕ 254 ಹೆಚ್ಎಸ್ಹೆಚ್ 2025 (ಭಾಗ-1), ದಿನಾಂಕ:04-08-2025 ರಲ್ಲಿನ ವೇಳಾಪಟ್ಟಿಯಂತೆ ಆಯುಷ್ ಇಲಾಖೆಯಲ್ಲಿಯೂ 2026ನೇ ಸಾಲಿನಲ್ಲಿ ಕರ್ನಾಟಕ ನಾಗರಿಕ ಸೇವಾ (ವೈದ್ಯಾಧಿಕಾರಿಗಳ ಮತ್ತು ಇತರೆ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ನಿಯಮಗಳು 2025ರಡಿ ಸಮಾಲೋಚನೆ ಮುಖಾಂತರ ಈ ಕೆಳಕಂಡ ವೇಳಾಪಟ್ಟಿಯಂತೆ ವರ್ಗಾವಣೆ ಪ್ರಕ್ರಿಯೆಯನ್ನು ಕೈಗೊಂಡು ಪೂರ್ಣಗೊಳಿಸುವ ಸಂಬಂಧ ಸರ್ಕಾರದ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

| | | |
|---|---|---|
| 1 | ನಿಯಮ 6(1) ರನ್ವಯ ಒಂದೇ ಸ್ಥಳದಲ್ಲಿ ಕನಿಷ್ಠ ಸೇವಾವಧಿ ಪೂರೈಸಿರುವ ಅಧಿಕಾರಿ/ಸಿಬ್ಬಂದಿಗಳ ಮಾಹಿತಿಯನ್ನು ಜಿಲ್ಲಾ ಆಯುಷ್ ಅಧಿಕಾರಿಗಳು ಆಯುಕ್ತಾಲಯಕ್ಕೆ ಸಲ್ಲಿಸುವ ದಿನಾಂಕ. | ದಿ: 01/01/2026 (ದಿ: 31/12/2025ರಂದು ಇದ್ದಂತೆ) |
| 2 | ನಿಯಮ 6(1) ರನ್ವಯ ಒಂದೇ ಸ್ಥಳದಲ್ಲಿ ಕನಿಷ್ಠ ಸೇವಾವಧಿ ಪೂರೈಸಿರುವ ಅಧಿಕಾರಿ/ಸಿಬ್ಬಂದಿಗಳ ತಾತ್ಕಾಲಿಕ ಪಟ್ಟಿ ಪ್ರಕಟಿಸುವ ದಿನಾಂಕ. | ದಿ: 15/01/2026 |
| 3 | ನಿಯಮ 6(1) ರನ್ವಯ ಒಂದೇ ಸ್ಥಳದಲ್ಲಿ ಕನಿಷ್ಠ ಸೇವಾವಧಿ ಪೂರೈಸಿರುವ ಅಧಿಕಾರಿ/ಸಿಬ್ಬಂದಿಗಳ ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನಾಂಕ. | ದಿ: 31/01/2026 |
| 4 | ನಿಯಮ 6(1) ರನ್ವಯ ಒಂದೇ ಸ್ಥಳದಲ್ಲಿ ಕನಿಷ್ಠ ಸೇವಾವಧಿ ಪೂರೈಸಿರುವ ಅಧಿಕಾರಿ/ಸಿಬ್ಬಂದಿಗಳ ಸರಿಪಡಿಸಿರುವ ಅಂತಿಮ ಪಟ್ಟಿ ಪ್ರಕಟಿಸುವ ದಿನಾಂಕ | ದಿ: 15/02/2026 |
| 5 | ನಿಯಮ 6(3) ರನ್ವಯ ವಿಶೇಷ ವರ್ಗದ ಕೋರಿಕೆ ವರ್ಗಾವಣೆಗಳ ಅರ್ಜಿಗಳನ್ನು ಆಯುಕ್ತಾಲಯಕ್ಕೆ ಸಲ್ಲಿಸುವ ದಿನಾಂಕ | ದಿ: 01/01/2026 ರಿಂದ ದಿ: 15/01/2026 |
| 6 | ವಿಶೇಷ ವರ್ಗದ ಕೋರಿಕೆ ವರ್ಗಾವಣೆಗಳ ತಾತ್ಕಾಲಿಕ ಪಟ್ಟಿ ಪ್ರಕಟಿಸುವ ದಿನಾಂಕ. | ದಿ : 31/01/2026 |
| 7 | ವಿಶೇಷ ವರ್ಗದ ಕೋರಿಕೆ ವರ್ಗಾವಣೆಗಳ ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನಾಂಕ. | ದಿ:15/02/2026 |
| 8 | ವಿಶೇಷ ವರ್ಗದ ಕೋರಿಕೆ ವರ್ಗಾವಣೆಗೆ ಅರ್ಹರಿರುವ ಅಧಿಕಾರಿ/ಸಿಬ್ಬಂದಿಗಳ ಅಂತಿಮ ಪಟ್ಟಿ ಸಿದ್ಧಪಡಿಸುವ ದಿನಾಂಕ. | ದಿ:01/03/2026 |
| 9 | ವರ್ಗಾವಣೆಗೆ ಸಂಬಂಧಿಸಿದಂತೆ ತಾತ್ಕಾಲಿಕ ಪಟ್ಟಿ ಪ್ರಕಟಿಸುವ ದಿನಾಂಕ. | ದಿ:01/03/2026 |
| 10 | ವರ್ಗಾವಣೆಗೆ ಅರ್ಹ ಅಧಿಕಾರಿ/ಸಿಬ್ಬಂದಿಗಳ ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನಾಂಕ. | ದಿ:15/03/2026 |
| 11 | ವರ್ಗಾವಣೆ ಅರ್ಹ ಅಧಿಕಾರಿ/ಸಿಬ್ಬಂದಿಗಳ ಅಂತಿಮ ಪಟ್ಟಿಯನ್ನು ಪ್ರಕಟಿಸುವ ದಿನಾಂಕ. | ದಿ:01/04/2026 |
| 12 | ಆಯುಕ್ತಾಲಯದಲ್ಲಿ ಅಂತಿಮ ಪಟ್ಟಿಯಂತೆ ವೃಂದವಾರು ಸಮಾಲೋಚನೆಯನ್ನು ಪ್ರಾರಂಭಿಸುವ ದಿನಾಂಕ. | ದಿ: 05/04/2026 ರಿಂದ ದಿ: 15/04/2026 ರವರೆಗೆ |

ಆದುದರಿಂದ 2026ನೇ ಸಾಲಿನ ವರ್ಗಾವಣೆ ಪ್ರಕ್ರಿಯೆ ಪೂರ್ವಸಿದ್ಧತೆಗಾಗಿ ಆಯುಷ್ ಇಲಾಖೆಯ ಎಲ್ಲಾ ವೃಂದದ ಅಧಿಕಾರಿ/ನೌಕರರ ಸೇವಾ ವಿವರಗಳನ್ನು ಕ್ಷೇತ್ರೀಯ / ಜಿಲ್ಲಾ ಮಟ್ಟದ ಅಧಿಕಾರಿಗಳಿಂದ ಮುಂಗಡವಾಗಿ ಕಲೆಹಾಕಲು ಅನುವಾಗುವಂತೆ ವೇಳಾಪಟ್ಟಿಯನ್ನು ಪ್ರಕಟಿಸಲು ನಿರ್ಧರಿಸಿದ್ದು, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಆಕುಕ 02 ಪಿಐಎಂ 2026,</u>**
**<u>ಬೆಂಗಳೂರು, ದಿನಾಂಕ:02.01.2026</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ 2026ನೇ ಸಾಲಿಗೆ ಸಂಬಂಧಿಸಿದಂತೆ ಆಯುಷ್ ಇಲಾಖೆಯ ವೈದ್ಯಾಧಿಕಾರಿ ಮತ್ತು ಇತರೆ ಸಿಬ್ಬಂದಿಗಳ ವರ್ಗಾವಣೆಯನ್ನು 'ಕರ್ನಾಟಕ ನಾಗರೀಕ ಸೇವಾ (ವೈದ್ಯಾಧಿಕಾರಿಗಳ ಮತ್ತು ಇತರೆ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ನಿಯಮಗಳು, 2025 ರಡಿ ಸಮಾಲೋಚನೆ ಮೂಲಕ ನಿಗದಿತ ಕಾಲಾವಧಿಯೊಳಗಾಗಿ ಪೂರ್ಣಗೊಳಿಸಲು ಅನುವಾಗುವಂತೆ ಪೂರ್ವಸಿದ್ಧತೆಗಾಗಿ ವೈದ್ಯಾಧಿಕಾರಿ ಮತ್ತು ಇತರೆ ಸಿಬ್ಬಂದಿಗಳ ದಿನಾಂಕ: 31/12/2025 ರಂದು ಇದ್ದಂತಹ ಸೇವಾ ಮಾಹಿತಿಯನ್ನು ಆಯಾಯಾ ಜಿಲ್ಲಾಆಯುಷ್ ಅಧಿಕಾರಿಗಳಿಂದ ಕಲೆಹಾಕಲು ಹಾಗೂ ವರ್ಗಾವಣಾ ಪ್ರಕ್ರಿಯೆಯನ್ನು ಪ್ರಾರಂಭಿಸಲು ಈ ಕೆಳಕಂಡ ವೇಳಾ ಪಟ್ಟಿಯನ್ನು ನಿಗದಿಪಡಿಸಿ ಆದೇಶಿಸಿದೆ.

| | | |
|---|---|---|
| 1 | ನಿಯಮ 6(1) ರನ್ವಯ ಒಂದೇ ಸ್ಥಳದಲ್ಲಿ ಕನಿಷ್ಠ ಸೇವಾವಧಿ ಪೂರೈಸಿರುವ ಅಧಿಕಾರಿ/ಸಿಬ್ಬಂದಿಗಳ ಮಾಹಿತಿಯನ್ನು ಜಿಲ್ಲಾ ಆಯುಷ್ ಅಧಿಕಾರಿಗಳು ಆಯುಕ್ತಾಲಯಕ್ಕೆ ಸಲ್ಲಿಸುವ ದಿನಾಂಕ. | ದಿ: 01/01/2026 (ದಿ: 31/12/2025ರಂದು ಇದ್ದಂತೆ) |
| 2 | ನಿಯಮ 6(1) ರನ್ವಯ ಒಂದೇ ಸ್ಥಳದಲ್ಲಿ ಕನಿಷ್ಠ ಸೇವಾವಧಿ ಪೂರೈಸಿರುವ ಅಧಿಕಾರಿ/ಸಿಬ್ಬಂದಿಗಳ ತಾತ್ಕಾಲಿಕ ಪಟ್ಟಿ ಪ್ರಕಟಿಸುವ ದಿನಾಂಕ. | ದಿ: 15/01/2026 |
| 3 | ನಿಯಮ 6(1) ರನ್ವಯ ಒಂದೇ ಸ್ಥಳದಲ್ಲಿ ಕನಿಷ್ಠ ಸೇವಾವಧಿ ಪೂರೈಸಿರುವ ಅಧಿಕಾರಿ/ಸಿಬ್ಬಂದಿಗಳ ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನಾಂಕ. | ದಿ: 31/01/2026 |
| 4 | ನಿಯಮ 6(1) ರನ್ವಯ ಒಂದೇ ಸ್ಥಳದಲ್ಲಿ ಕನಿಷ್ಠ ಸೇವಾವಧಿ ಪೂರೈಸಿರುವ ಅಧಿಕಾರಿ/ಸಿಬ್ಬಂದಿಗಳ ಸರಿಪಡಿಸಿರುವ ಅಂತಿಮ ಪಟ್ಟಿ ಪ್ರಕಟಿಸುವ ದಿನಾಂಕ | ದಿ: 15/02/2026 |
| 5 | ನಿಯಮ 6(3) ರನ್ವಯ ವಿಶೇಷ ವರ್ಗದ ಕೋರಿಕೆ ವರ್ಗಾವಣೆಗಳ ಅರ್ಜಿಗಳನ್ನು ಆಯುಕ್ತಾಲಯಕ್ಕೆ ಸಲ್ಲಿಸುವ ದಿನಾಂಕ | ದಿ: 01/01/2026 ರಿಂದ ದಿ: 15/01/2026 |
| 6 | ವಿಶೇಷ ವರ್ಗದ ಕೋರಿಕೆ ವರ್ಗಾವಣೆಗಳ ತಾತ್ಕಾಲಿಕ ಪಟ್ಟಿ ಪ್ರಕಟಿಸುವ ದಿನಾಂಕ. | ದಿ : 31/01/2026 |
| 7 | ವಿಶೇಷ ವರ್ಗದ ಕೋರಿಕೆ ವರ್ಗಾವಣೆಗಳ ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನಾಂಕ. | ದಿ:15/02/2026 |
| 8 | ವಿಶೇಷ ವರ್ಗದ ಕೋರಿಕೆ ವರ್ಗಾವಣೆಗೆ ಅರ್ಹರಿರುವ ಅಧಿಕಾರಿ/ಸಿಬ್ಬಂದಿಗಳ ಅಂತಿಮ ಪಟ್ಟಿ ಸಿದ್ಧಪಡಿಸುವ ದಿನಾಂಕ. | ದಿ:01/03/2026 |
| 9 | ವರ್ಗಾವಣೆಗೆ ಸಂಬಂಧಿಸಿದಂತೆ ತಾತ್ಕಾಲಿಕ ಪಟ್ಟಿ ಪ್ರಕಟಿಸುವ ದಿನಾಂಕ. | ದಿ:01/03/2026 |
| 10 | ವರ್ಗಾವಣೆಗೆ ಅರ್ಹ ಅಧಿಕಾರಿ/ಸಿಬ್ಬಂದಿಗಳ ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನಾಂಕ. | ದಿ:15/03/2026 |
| 11 | ವರ್ಗಾವಣೆ ಅರ್ಹ ಅಧಿಕಾರಿ/ಸಿಬ್ಬಂದಿಗಳ ಅಂತಿಮ ಪಟ್ಟಿಯನ್ನು ಪಕಟಿಸುವ ದಿನಾಂಕ. | ದಿ:01/04/2026 |
| 12 | ಆಯುಕ್ತಾಲಯದಲ್ಲಿ ಅಂತಿಮ ಪಟ್ಟಿಯಂತೆ ವೃಂದವಾರು ಸಮಾಲೋಚನೆಯನ್ನು ಪ್ರಾರಂಭಿಸುವ ದಿನಾಂಕ. | ದಿ: 05/04/2026 ರಿಂದ ದಿ: 15/04/2026 ರವರೆಗೆ |

ಮುಂದುವರೆದು, ವರ್ಗಾವಣಾ ಪ್ರಕ್ರಿಯೆಯನ್ನು ಮುಕ್ತ ಹಾಗೂ ಪಾರದರ್ಶಕವಾಗಿ ನಿರ್ವಹಿಸಲು ಅನುವಾಗುವಂತೆ ಇಲಾಖೆಗೆ ಅವಶ್ಯಕವಾಗುವಂತಹ ವರ್ಗಾವಣಾ ತಂತ್ರಾಂಶವನ್ನು ಅಭಿವೃದ್ಧಿಪಡಿಸಿ ನೀಡಲು ನಿರ್ದೇಶಕರು, KHDS ರವರಿಗೆ ಸೂಚಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

2/1

**(ಶ್ರೀಪತಿ ಪಿ.ಕೆ.)**
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾವೈಪ ಮತ್ತು ಸಮನ್ವಯ)

02/01

**ಇವರಿಗೆ:**

1. ಮಹಾಲೇಖಪಾಲರು (ಎ&ಇ),), ಕರ್ನಾಟಕ ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, 560 001.
2. ಆಯುಕ್ತರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯಸೌಧ, ಬೆಂಗಳೂರು.
4. ಎಲ್ಲಾ ಜಿಲ್ಲಾ ಆಯುಷ್ ಅಧಿಕಾರಿಗಳಿಗೆ (ಆಯುಷ್ ಆಯುಕ್ತರ ಮುಖಾಂತರ)
5. ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
6. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

<u>ಪ್ರತಿ:</u>

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಅಪರ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.